# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ 2020–21ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಒದಗಿಸಿರುವ ರೂ.3.00ಕೋಟಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 82 ಕೆಒಎಲ್ ಆಕ 2020, ದಿ: 03.07.2020.
2. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಕಅಪ್ರಾ/ ಕಾ–1/ 23/19–20, ದಿ: 05.10.2020.

**<u>ಪ್ರಸ್ತಾವನೆ:</u>**

ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ 2020–21ನೇ ಸಾಲಿನ ಮುಂದುವರೆದ ಕಾರ್ಯಕ್ರಮಗಳಿಗೆ ರೂ.234.00ಲಕ್ಷಗಳ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆಯನ್ನು ನೀಡಲಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಇವರು 2020–21ನೇ ಸಾಲಿನ ಪೂರಕ ಅಂದಾಜುಗಳಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಲೆಕ್ಕಶೀರ್ಷಿಕೆ: 2205–00–102–1–81 (ಇತರೆ ಖರ್ಚುಗಳು) ರಡಿಯಲ್ಲಿ ರೂ.3.00ಕೋಟಿಗಳ ಹೆಚ್ಚುವರಿ ಅನುದಾನವನ್ನು ಬಿಡುಗಡೆಯಾಗಿರುತ್ತದೆ. ಸದರಿ ಮೊತ್ತಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಕಸಂವಾ 94 ಕೆಒಎಲ್ ಆಕ 2020 ಬೆಂಗಳೂರು, ದಿನಾಂಕ: 15.10.2020.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಮುಂದುವರಿದ ಕಾರ್ಯಕ್ರಮಗಳು/ಯೋಜನೆಗಳನ್ನು ಕೈಗೊಳ್ಳಲು 2020–21ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಒದಗಿಸಿರುವ ರೂ.3.00ಕೋಟಿಗಳಿಗೆ (ರೂಪಾಯಿ ಮೂರು ಕೋಟಿಗಳು ಮಾತ್ರ) ಅನುಬಂಧದಲ್ಲಿ ಲಗತ್ತಿಸಿರುವ ಕಾರ್ಯಕ್ರಮಗಳು/ಯೋಜನೆಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

<u>ನಿಬಂಧನೆಗಳು</u>

1. 2020–21 ನೇ ಸಾಲಿನಲ್ಲಿ ಅನುಮೋದನೆಯಾದ ಹೊಸದಾಗಿ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಹಾಗೂ ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು ಮಾತ್ರ ಮುಂದುವರೆಸಬೇಕು.
2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದ್ದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ ನಿಯಮಾನುಸಾರ ಮಂಜೂರಾತಿ ಪಡೆಯಬೇಕು.
3. ಹೊಸ ಸಂಸ್ಥೆಗಳಿಗೆ ಅಥವಾ ಅದೇ ಯೋಜನೆಯ ಹೊಸ ಪ್ರಕರಣಗಳಲ್ಲಿ ಒಳಗೊಂಡಿರುವ ಕೆಲಸಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸಾಲ ಬಂಡವಾಳ ವೆಚ್ಚ ಸಹಾಯಧನ/ಸೋಡಿ ಮುಂತಾದವುಗಳ ಮಂಜೂರಾತಿ ಇವು ಆಯಾಯ ಬಾಬ್ತುಗಳಿಗೆ ಸಂಬಂಧಿಸಿದ ಪ್ರತ್ಯಾಯೋಜಿತ ಅಧಿಕಾರಗಳ ಪರಿಮಿತಿಯಲ್ಲಿರಬೇಕು.

.....2

4. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು, ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.
5. ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.
6. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 91 ವೆಚ್ಚ-7/2020, ದಿನಾಂಕ: 30.05.2020ರಂತೆ 2020-21ನೇ ಸಾಲಿನ ಆಯವ್ಯಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಯೋಜನೆಗಳಿಗೆ ಎದುರಾಗಿ ಒದಗಿಸಿರುವ ಅನುದಾನವನ್ನು ಸರ್ಕಾರದಿಂದ ಪ್ರತ್ಯಾಯೋಜಿಸಿ ಮಾಡಿರುವ ಯೋಜನೆಗಳ ಎದುರಾಗಿ ನವೆಂಬರ್ 2020ರವರೆಗೆ ಪರಿಷ್ಕೃತ ಅಂದಾಜಿನ ಅರ್ಧದಷ್ಟು ಮೊತ್ತವನ್ನು ಮಾತ್ರ ಬಳಸಿಕೊಳ್ಳತಕ್ಕದ್ದು.
7. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 91 ವೆಚ್ಚ-7/2020, ದಿನಾಂಕ: 30.05.2020ರಂತೆ ವೇತನಕ್ಕೆ ಸಂಬಂಧಿಸಿದಂತೆ ಏಪ್ರಿಲ್, ಮೇ ತಿಂಗಳಿಗೆ ಬಿಡುಗಡೆ ಮಾಡಿರುವುದೂ ಸೇರಿದಂತೆ ಆಯವ್ಯಯದ 8/12 ಭಾಗದಷ್ಟು ಮೊತ್ತವನ್ನು ಮಾತ್ರ ಬಿಡುಗಡೆ ಮಾಡಬಹುದಾಗಿದೆ. ಇದರಲ್ಲಿ ಈಗಾಗಲೇ ಬಿಡುಗಡೆ ಮಾಡಲಾಗಿರುವ ಮೊತ್ತವನ್ನು ಹೊರತುಪಡಿಸಿ ಉಳಿದಿರುವ ಮೊತ್ತವನ್ನು ಎರಡು ಕಂತುಗಳಲ್ಲಿ ಬಿಡುಗಡೆ ಮಾಡಬಹುದಾಗಿದೆ. ಈ ಸೂಚನೆ ಹೆಚ್.ಆರ್.ಎಂ.ಎಸ್. ನಿಂದ ಹೊರಗೆ ವೇತನ ಸೆಳೆಯುವ ಸಂಸ್ಥೆಗಳಿಗೆ ಅನ್ವಯಿಸುವುದಿಲ್ಲ. ಹೆಚ್.ಆರ್.ಎಂ.ಎಸ್. ಹೊರಗೆ ವೇತನ ಸೆಳೆಯುತ್ತಿರುವ ಸಹಾಯನುದಾನ ಸಂಸ್ಥೆಗಳಿಗೆ ಆಯವ್ಯಯವನ್ನು ಪರಿಷ್ಕರಿಸಿರುವುದರಿಂದ ಪರಿಷ್ಕೃತ ಆಯವ್ಯಯದಲ್ಲಿ ನವೆಂಬರ್ ತಿಂಗಳುವರೆಗೆ ಪ್ರತಿ ತಿಂಗಳು 1/12ರಂತೆ ಬಿಡುಗಡೆ.
8. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 91 ವೆಚ್ಚ-7/ 2020, ದಿನಾಂಕ: 30.05.2020ರಂತೆ ಯಾವುದೇ ಹೊಸ ಯೋಜನೆ/ಕಾರ್ಯಕ್ರಮ/ ಕಾಮಗಾರಿ ಕೈಗೊಳ್ಳುವ ಮುನ್ನ ಆಡಳಿತ ಇಲಾಖೆಯ ಮೂಲಕ ಆರ್ಥಿಕ ಇಲಾಖೆಯ ಸಹಮತಿಯನ್ನು ಕಡ್ಡಾಯವಾಗಿ ಪಡೆಯಬೇಕೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.
9. ಈ ಆದೇಶದ ಅನುಬಂಧದಲ್ಲಿ ಲಗತ್ತಿಸಿರುವ ಕಾರ್ಯಕ್ರಮಗಳು/ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆಯೇ, ಅದೇ ಉದ್ದೇಶಕ್ಕಾಗಿ ಮಾತ್ರ ಬಳಸಿಕೊಳ್ಳತಕ್ಕದ್ದು ಮತ್ತು ಬಳಸಿಕೊಂಡ ಬಗ್ಗೆ ಕ್ರಮಾಂಕವಾರು ವಿವರವಾದ ಹಣಬಳಕೆ ಪ್ರಮಾಣ ಪತ್ರವನ್ನು ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಇವರು ದೃಢೀಕರಣಗೊಳಿಸಿ ಸರ್ಕಾರಕ್ಕೆ ಸಲ್ಲಿಸುವುದು ಮತ್ತು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಳವಡಿಸುವುದು.
10. ಪ್ರತಿಯೊಂದು ಕಾರ್ಯಕ್ರಮ/ಯೋಜನೆಗಳಿಗೆ ಪ್ರತ್ಯೇಕವಾಗಿ ಮಾಸಿಕ ಕಾರ್ಯಕ್ರಮ, ಅನುಷ್ಠಾನ, ವೇಳಾಪಟ್ಟಿ (ಎಂಪಿಕ್) ವರದಿಯನ್ನು ನಿಗಧಿತ ನಮೂನೆಯಲ್ಲಿ ತಯಾರಿಸಿ ಪ್ರತಿ ತಿಂಗಳ 15ನೇ ತಾರೀಖಿನೊಳಗೆ ನಿರ್ದೇಶಕರು (ಪಿ.ಎಂ.ಐ), ಯೋಜನಾ ಇಲಾಖೆಗೆ ಕಳುಹಿಸಿಕೊಡುವುದು.
11. ಪ್ರಾಧಿಕಾರದ ಸಭಾ ನಡವಳಿಗಳು ಹಾಗೂ ಕಾರ್ಯಕ್ರಮಗಳು/ಯೋಜನೆಗಳವಾರು ಹಣ ಬಿಡುಗಡೆಯನ್ನು ಕಡ್ಡಾಯವಾಗಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಳವಡಿಸುವುದು/ಪ್ರಚುರಪಡಿಸುವುದು.
12. ಉದ್ದೇಶಿತ ಕಾರ್ಯಕ್ರಮಗಳ್ನು ಅನುಷ್ಠಾನಗೊಳಿಸುವ ಕುರಿತಂತೆ ಮಾರ್ಗಸೂಚಿಗಳನ್ನು ತಯಾರಿಸಿ ಸರ್ಕಾರದ ಅನುಮೋದನೆಗಾಗಿ ಸಲ್ಲಿಸುವುದು.
13. 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ಅದರ ನಿಯಮಗಳು 2000 ವನ್ನು ಕಡ್ಡಾಯವಾಗಿ ಪಾಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ: 30.05.2020 ಮತ್ತು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ ವೆಚ್ಚ-7/2020, ದಿನಾಂಕ: 30.05.2020 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ)

<u>ಪ್ರತಿಯನ್ನು:</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 94 ಕೆಓಎಲ್ ಆಕ 2020, ದಿನಾಂಕ: 15.10.2020ಕ್ಕೆ ಅನುಬಂಧ**

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಯೋಜನಾ ಕಾರ್ಯಕ್ರಮಗಳ ಹೆಸರು/ವಿವರ | 2020-21ನೇ ಸಾಲಿನ ಹೆಚ್ಚುವರಿ ಅನುದಾನ |
|---|---|---|
| 1 | **ಕನ್ನಡ ಮಾಧ್ಯಮ ಪ್ರಶಸ್ತಿ ಕಾರ್ಯಕ್ರಮ:** ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ವ್ಯಾಸಾಂಗ ಮಾಡಿ ಅತಿ ಹೆಚ್ಚು ಅಂಕಗಳಿಸಿದ ರಾಜ್ಯದ ಪ್ರತಿ ತಾಲ್ಲೂಕು/ ಹೊರ ರಾಜ್ಯಗಳ ಪ್ರತಿ ಶಾಲಾ ಮಟ್ಟದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿದ ರಾಜ್ಯದ ಹಾಗೂ ಹೊರ ರಾಜ್ಯಗಳ ಸುಮಾರು 2000 ವಿದ್ಯಾರ್ಥಿಗಳಿಗೆ ಕನ್ನಡ ಮಾಧ್ಯಮ ಪ್ರಶಸ್ತಿ ನೀಡಿ ಪುರಸ್ಕರಿಸುವ ಕಾರ್ಯಕ್ರಮ. | 242.50 |
| 2 | **ಹೊರರಾಜ್ಯದ ಕನ್ನಡ ಎಂ.ಎ. ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನ ಕಾರ್ಯಕ್ರಮ:** ಹೊರರಾಜ್ಯದ 9 ವಿಶ್ವವಿದ್ಯಾಲಯಗಳ ಕನ್ನಡ ಅಧ್ಯಯನ ಕೇಂದ್ರಗಳಲ್ಲಿ ಕನ್ನಡದಲ್ಲಿ ಎಂ.ಎ. ವ್ಯಾಸಂಗ ಮಾಡುತ್ತಿರುವ ಸುಮಾರು 150 ವಿದ್ಯಾರ್ಥಿಗಳಿಗೆ ವಾರ್ಷಿಕ ವಿದ್ಯಾರ್ಥಿವೇತನ ಹಾಗೂ ಆರ್ಥಿಕ ಸಹಕಾರ ನೀಡಿ ಪ್ರೋತ್ಸಾಹಿಸುವ ಕಾರ್ಯಕ್ರಮ. | 37.50 |
| 3 | **ನ್ಯಾಯಾಂಗದಲ್ಲಿ ಕನ್ನಡ ಕಾರ್ಯಕ್ರಮ:** ಕನ್ನಡದಲ್ಲಿ ತೀರ್ಪು ನೀಡಿದ ಜಿಲ್ಲೆ ನ್ಯಾಯಾಧೀಶರು, ಕನ್ನಡದಲ್ಲಿ ವಾದ ಮಂಡಿಸಿದ ಸರ್ಕಾರಿ ಅಭಿಯೋಜನರು ಹಾಗೂ ವಕೀಲರುಗಳಿಗೆ ಪ್ರೋತ್ಸಾಹಧನ ನೀಡಿ ಗೌರವಿಸುವ ಕಾರ್ಯಕ್ರಮ (2019-20 ಮತ್ತು 2020-21ನೇ ಸಾಲಿನ ಎರಡು ವರ್ಷದ ಕಾರ್ಯಕ್ರಮ). | 20.00 |
| | **ಒಟ್ಟು** | **300.00** |

(ಹೆಚ್.ಕೆ. ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ).